(೨೬)

ಇಲಾಖೆ / ವಿಷಯ : DEPARTMENT / SUBJECT: ಹೈಕೋರ್ಟ್ ವಿಭಾಗ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE: 26/11/20

# ಬಿಬಿಎಂಪಿ ಚುನಾವಣೆ ತೀರ್ಪು ಕಾಯ್ದಿರಿಕೆ

26-11-20

ಸಂ.ಕ.ಸಮಾಚಾರ ಬೆಂಗಳೂರು

ಬಿಬಿಎಂಪಿಗೆ ಶೀಘ್ರ ಚುನಾವಣೆ ನಡೆಸುವಂತೆ ಕೋರಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ಪೂರ್ಣಗೊಳಿಸಿರುವ ಹೈಕೋರ್ಟ್ ತೀರ್ಪು ಕಾಯ್ದಿರಿಸಿದೆ.



ಬಿಬಿಎಂಪಿಗೆ ಶೀಘ್ರ ಚುನಾವಣೆ ನಡೆಸುವಂತೆ ಕೋರಿ ಮಾಜಿ ಕಾರ್ಪೊರೇಟರ್‌ಗಳಾದ ಎಂ. ಶಿವರಾಜು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್ ಓಕಾ ನೇತೃತ್ವದ ವಿಭಾಗೀಯ ಪೀಠ ವಿಚಾರಣೆ ನಡೆಸಿತ್ತು.

ಅಡ್ವೊಕೇಟ್ ಜನರಲ್ ಪ್ರಭುಲಿಂಗ ಕೆ. ನಾವದಗಿ ವಾದ ಮಂಡಿಸಿ, ಸರ್ಕಾರಕ್ಕೆ ಚುನಾವಣೆ ಮುಂದೂಡುವ ಯಾವುದೇ ಉದ್ದೇಶವಿಲ್ಲ. ಬೆಂಗಳೂರು ನಗರ ವಿಸ್ತಾರವಾಗಿ ಬೆಳೆದಿದೆ. ಹೀಗಾಗಿ ಬಿಬಿಎಂಪಿಯ ವಾರ್ಡ್‌ಗಳನ್ನು ಮರುವಿಂಗಡಣೆ ಮಾಡುವ ಅಗತ್ಯವಿದೆ. ಮರುವಿಂಗಡಣೆ ಬಳಿಕ ಚುನಾವಣೆ ನಡೆಸಲಾಗುವುದು ಎಂದು ಸಮರ್ಥಿಸಿಕೊಂಡರು.

ಇದಕ್ಕೆ ಆಕ್ಷೇಪಿಸಿದ ಅರ್ಜಿದಾರರ ಪರ ವಕೀಲ ಪ್ರೊ. ರವಿವರ್ಮಕುಮಾರ್, ಈಗಾಗಲೇ ಹೈಕೋರ್ಟ್ ವಿಭಾಗೀಯ ಚುನಾವಣೆ ಮುಂದೂಡುವ ಅಧಿಕಾರ ಸರ್ಕಾರಕ್ಕಿಲ್ಲ. ಅವಧಿಗೆ ಮುನ್ನ ಚುನಾವಣೆ ನಡೆಸುವುದು ಚುನಾವಣಾ ಆಯೋಗದ ಸಾಂವಿಧಾನಿಕ ಕರ್ತವ್ಯ ಎಂದು ವಾದಿಸಿದರು.

## ಚಾನೆಲ್ ಮುಖ್ಯಸ್ಥೆಗೆ ಜಾಮೀನು

ಟಿಆರ್‌ಪಿ ಹಗರಣದಲ್ಲಿ ಆರೋಪಿಯಾಗಿರುವ ಖಾಸಗಿ ಸುದ್ದಿ ವಾಹಿನಿಯ ಸಿಒಒ ಪ್ರಿಯಾ ಮುಖರ್ಜಿ ಅವರಿಗೆ ಹೈಕೋರ್ಟ್ 20 ದಿನಗಳ ಕಾಲ ಟ್ರಾನ್ಸಿಟ್ ನಿರೀಕ್ಷಣಾ ಜಾಮೀನು ನೀಡಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಿಸಿರುವ ಮುಂಬೈ ಪೊಲೀಸರು ಬೆಂಗಳೂರಿನ ಬನ್ನೇರುಘಟ್ಟ ಪೊಲೀಸ್ ಠಾಣೆಗೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿ ನೋಟಿಸ್ ಜಾರಿ ಮಾಡಿದ್ದರಿಂದ ಬಂಧನ ಭೀತಿಯಿಂದ ಪ್ರಿಯಾ ಮುಖರ್ಜಿ ನಿರೀಕ್ಷಣಾ ಜಾಮೀನು ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

**ಟಿಆರ್‌ಪಿ ಹಗರಣ**

ಅರ್ಜಿ ವಿಚಾರಣೆ ನಡೆಸಿದ ನ್ಯಾ.ಎಚ್.ಪಿ. ಸಂದೇಶ್ ಅವರಿದ್ದ ಏಕ ಸದಸ್ಯ ಪೀಠ, ಪ್ರಿಯಾ ಮುಖರ್ಜಿ ಅವರಿಗೆ 20 ದಿನಗಳ ಕಾಲ ಟ್ರಾನ್ಸಿಟ್ ಜಾಮೀನು ನೀಡಿ ಆದೇಶಿಸಿದೆ. ಈ ಅವಧಿಯಲ್ಲಿ ಪೊಲೀಸರು ಒಂದು ವೇಳೆ ಬಂಧಿಸಿದರೆ, 20 ಲಕ್ಷ ಮೊತ್ತದ ಬಾಂಡ್ ಹಾಗೂ ಇಬ್ಬರು ವ್ಯಕ್ತಿಗಳ ಭದ್ರತೆ ಪಡೆದು ಬಿಡುಗಡೆ ಮಾಡಬೇಕು ಎಂದು ನಿರ್ದೇಶಿಸಿದೆ. ಈ 20 ದಿನಗಳ ಬಳಿಕ ಸೂಕ್ತ ಕಾನೂನು ಪರಿಹಾರ ಕಂಡುಕೊಳ್ಳಬಹುದು ಎಂದು ಸ್ಪಷ್ಟಪಡಿಸಿದೆ.